ದಿನಾಂಕ 28-03-2024 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆಃ ಅರ್ಜಿದಾರರ ಪರವಾಗಿ ಮೇಡಮ್ ಎ.ಎಸ್. ವಕೀಲರವರಿಂದಃ**

ನಾನು ಈ ಅರ್ಜಿಯಲ್ಲಿ ಅರ್ಜಿದಾರನಾಗಿರುತ್ತೇನೆ. ನಾನು ಸಹಿ ಮಾಡಿರುವ ಮುಖ್ಯ ವಿಚಾರಣೆಯ ಪ್ರಮಾಣ ಪತ್ರ ಸಲ್ಲಿಸಿದ್ದೇನೆ. ನನ್ನ ಹೇಳಿಕೆಯ ಮೇರೆಗೆ ತಯಾರಿಸಲಾಗಿದೆ ಮತ್ತು ಅದರಲ್ಲಿರುವ ವಿಷಯಗಳು ಸರಿ ಇವೆ.

ಹೇಳಿಕೆಯ ದೂರಿನ ಯಥಾ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ.1 ಎಂದು, ಪ್ರ.ವ.ವ., ಯ ಯಥಾ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ.2 ಎಂದು, ಸ್ಥಳ ಪಂಚನಾಮೆಯ ಯಥಾ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ.3 ಎಂದು, ನಕ್ಷೆಯ ಯಥಾ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ.4 ಎಂದು, ಐಎಂವಿ ವರದಿಯ ಯಥಾ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ.5 ಎಂದು, ಗಾಯದ ಪ್ರಮಾಣ ಪತ್ರದ ಯಥಾ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ.6 ಎಂದು, ಎ.ಐ.ಆರ್. ವರದಿಯ ಯಥಾ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ. 7 ಎಂದು, ಅಂತಿಮ ವರದಿಯ ಯಥಾ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ.8 ಎಂದು, 15 ವೈದ್ಯಕೀಯ ಬಿಲ್ ಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಒಟ್ಟಾಗಿ ನಿಪಿ.9 ಎಂದು, ದಿನಾಂಕ 16.12.2022 ರಂದು ಆದರ್ಶ ಆಸ್ಪತ್ರೆಯವರು ನೀಡಿರುವ ಅಂಗನ್ಯೂನತೆಯ ಪತ್ರವನ್ನು ಹಾಜರುಪಡಿಸಿದ್ದು ಅದನ್ನು ನಿಪಿ.10 ಎಂದು, ಆದರ್ಶ ಆಸ್ಪತ್ರೆಯವರು ನೀಡಿರುವ ವೈದ್ಯಕೀಯ ಪತ್ರವನ್ನು ಹಾಜರುಪಡಿಸಿದ್ದು ಅದನ್ನು ನಿಪಿ.11 ಎಂದು, ಶ್ರೀ ರಾಮ್ ಫೈನಾನ್ಸ್ ಲಿಮಿಟೆಡ್ ನವರು ನೀಡಿರುವ ಪ್ಲೇ ಸ್ಲಿಪ್ ನ್ನು ಹಾಜರುಪಡಿಸಿದ್ದು ಅದನ್ನು ನಿಪಿ.12 ಎಂದು, ದಿನಾಂಕ 08.02.2024 ರಂದು ಶ್ರೀ ರಾಮ್ ಫೈನಾನ್ಸ್ ಲಿಮಿಟೆಡ್ ನವರು ಕಳುಹಿಸಿರುವ ಮೇಲ್ ನ್ನು ಹಾಜರುಪಡಿಸಿದ್ದು ಅದನ್ನು ನಿಪಿ.13 ಎಂದು, ಆಧಾರ್ ಕಾರ್ಡ್ ನ್ನು ಹಾಜರುಪಡಿಸಿದ್ದು ಅದನ್ನು ನಿಪಿ.14 ಎಂದು ಗುರ್ತಿಸಲಾಯಿತು.

ಮುಂದುವರೆದ ಮುಖ್ಯ ವಿಚಾರಣೆಗೆ ಸಮಯ ಕೋರಿದ್ದು ಸಮಯ ನೀಡಲಾಯಿತು.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಸಾಕ್ಷ್ಯವನ್ನು ನನ್ನ ಉಕ್ತಲೇಖನದ ಮೂಲಕ ಬೆರಳಚ್ಚು ಮಾಡಿಸಲಾಯಿತು. )

ಓ.ಹೇ.ಕೇ.ಸ.ಇದೆ ಎಂದು ಒಪ್ಪಿದ್ದೇನೆ.

ಹೆ.ಹಿ.ಸಿ.ನ್ಯಾ.ಮತ್ತು ಎ.ಸಿ.ಜೆ.ಎಂ. ಉಡುಪಿ.